ಅವಕಾಶ ಕಲ್ಪಿಸಲಾಗಿದ್ದು, ಈ ಕ್ರೀಡಾಪಟುಗಳಿಗೆ ಅನುಭವಿ ತರಬೇತುದಾರರಿಂದ ವೈಜ್ಞಾನಿಕ ಕ್ರೀಡಾ ತರಬೇತಿ, ಉಚಿತ ಕ್ರೀಡಾ ಕಿಟ್, ವಸತಿ ಹಾಗೂ ಊಟೋಪಹಾರ ವ್ಯವಸ್ಥೆ ಕಲ್ಪಿಸಲಾಗಿದೆ. ತರಬೇತುದಾರರು ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ ತರಬೇತಿ ಯೋಜನೆಯೊಂದಿಗೆ ಕ್ರೀಡಾಪಟುಗಳಿಗೆ ಮಾರ್ಗದರ್ಶನ ನೀಡುತ್ತಿದ್ದಾರೆ. 2013–14ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಯುವ ಕ್ರೀಡಾಪಟುಗಳು ಮಾನ್ಯತೆ ಪಡೆದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ರಾಜ್ಯ ಮಟ್ಟದ–458, ರಾಷ್ಟ್ರ ಮಟ್ಟದ–65 ಮತ್ತು ಅಂತರ–ರಾಷ್ಟ್ರೀಯ ಮಟ್ಟದ–02 ಪದಕಗಳನ್ನು ಗೆದ್ದು ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ.

(ಈ) ರಾಜ್ಯದಲ್ಲಿ ಇಲಾಖೆಯಿಂದ ನಿರ್ಮಿಸಿರುವ ಕ್ರೀಡಾಂಗಣಗಳನ್ನು ಆಯಾ ಜಿಲ್ಲೆಯ ಅಪರ ಜಿಲ್ಲಾಧಿಕಾರಿಗಳು ಮತ್ತು ಆಯಾ ತಾಲ್ಲೂಕಿನ ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಕ್ರಮವಾಗಿ ಜಿಲ್ಲಾ ಕ್ರೀಡಾಂಗಣ ಸಮಿತಿ ಮತ್ತು ತಾಲ್ಲೂಕು ಕ್ರೀಡಾಂಗಣ ಸಮಿತಿಗಳ ಮೂಲಕ ನಿರ್ವಹಿಸಲಾಗುತ್ತಿದೆ. ಸದರಿ ಸಮಿತಿಗಳಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳಾದ ಉಪ ನಿರ್ದೇಶಕರು/ಸಹಾಯಕ ನಿರ್ದೇಶಕರು ಕಾರ್ಯದರ್ಶಿಗಳಾಗಿದ್ದು, ನಿಯಮಾನುಸಾರ ನಿರ್ವಹಿಸಲಾಗುತ್ತಿದೆ.

(ಉ) ರಾಜ್ಯದಲ್ಲಿರುವ ಕ್ರೀಡಾಂಗಣಗಳನ್ನು ವರ್ಷಪೂರ್ತಿ ಕ್ರೀಡಾಪಟುಗಳ ಬಳಕೆಗೆ ಉಚಿತವಾಗಿ ಮತ್ತು ಮುಕ್ತವಾಗಿ ಒದಗಿಸಲಾಗುತ್ತಿದೆ. ಸರ್ಕಾರದ ವಿವಿಧ ಇಲಾಖೆಗಳು, ಕ್ರೀಡಾ ಸಂಸ್ಥೆಗಳು ಮತ್ತು ಸಾರ್ವಜನಿಕರು ಕ್ರೀಡಾಂಗಣಗಳನ್ನು ಸ್ಥಳೀಯ, ತಾಲ್ಲೂಕು, ಜಿಲ್ಲಾ, ರಾಜ್ಯ ಮತ್ತು ರಾಷ್ಟ್ರ ಮಟ್ಟದ ಕ್ರೀಡಾಕೂಟಗಳನ್ನು ಆಯೋಜಿಸಲು ಬಳಸುತ್ತಿದ್ದಾರೆ.

(ಊ) ಇಲಾಖೆಯ ಕ್ರೀಡಾಂಗಣಗಳ ನಿರ್ವಹಣೆ ಮತ್ತು ಸಮರ್ಪಕವಾಗಿ ಬಳಸಿಕೊಳ್ಳಲು ಪ್ರತಿ ಜಿಲ್ಲೆಯಲ್ಲಿ ಜಿಲ್ಲಾ ಕ್ರೀಡಾಂಗಣ ಸಮಿತಿ ಹಾಗೂ ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಕ್ರೀಡಾಂಗಣ ಸಮಿತಿಗಳಿಗೆ ಕ್ರೀಡಾಂಗಣ ನಿರ್ವಹಣೆಯ ಜವಾಬ್ದಾರಿಯನ್ನು ನೀಡಲಾಗಿದೆ.

ಕಾರ್ಮಿಕ ವಿಮಾ ಚಿಕಿತ್ಸಾ ಕೇಂದ್ರ ಸ್ಥಾಪಿಸುವುದು

62 (103) ಶ್ರೀ ಸುಧಾಕರ ಲಾಲ್ ಪಿ.ಆರ್. :– ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :–

(ಅ) ವಸಂತನರಸಾಪುರ ಕೈಗಾರಿಕಾ ಪ್ರದೇಶದಲ್ಲಿ ಕಾರ್ಮಿಕ ವಿಮಾ ಚಿಕಿತ್ಸಾ ಕೇಂದ್ರವಿಲ್ಲದೇ ಅಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಾರ್ಮಿಕ ವಿಮಾ ಚಿಕಿತ್ಸಾ ಕೇಂದ್ರವನ್ನು ಸ್ಥಾಪಿಸಲಾಗುವುದೇ ; ಸ್ಥಾಪಿಸುವ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಇ) ಹಾಗಿದ್ದಲ್ಲಿ, ಯಾವಾಗ ಸ್ಥಾಪಿಸಲಾಗುವುದು ; ಸ್ಥಾಪನೆಯಾಗುವವರೆಗೆ ಕಾರ್ಮಿಕರಿಗೆ ತುರ್ತು ಚಿಕಿತ್ಸೆ ನೀಡಲು ಸರ್ಕಾರ ಯಾವುದಾದರೂ ಕ್ರಮ ಕೈಗೊಂಡಿದೆಯೇ ;

(ಈ) ಹಾಗಿದ್ದಲ್ಲಿ, ಏನು ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಉ) ಹೊಸ ಕಾರ್ಮಿಕ ವಿಮಾ ಚಿಕಿತ್ಸಾ ಕೇಂದ್ರ ಸ್ಥಾಪನೆಗೆ ಇರುವ ಮಾನದಂಡಗಳೇನು ? (ವಿವರ ನೀಡುವುದು)

ಶ್ರೀ ಪಿ.ಟಿ. ಪರಮೇಶ್ವರನಾಯ್ಕ (ಮಾನ್ಯ ಕಾರ್ಮಿಕ ರಾಜ್ಯ ಸಚಿವರು) :–

(ಅ) ಹೌದು.

(ಆ) ಹೌದು.

ಕಾರಾವಿ ಚಿಕಿತ್ಸಾ ಕೇಂದ್ರವನ್ನು ಸ್ಥಾಪಿಸಲು ಸರ್ಕಾರ ದಿನಾಂಕ : 29–03–2014 ರಂದು ಕಾ.ರಾ.ವಿ. ನಿಗಮ, ನವದೆಹಲಿಗೆ ಪ್ರಸ್ತಾವನೆ ಸಲ್ಲಿಸಿದೆ.

(ಇ) ಕಾರಾವಿ ನಿಗಮದಿಂದ ಅನುಮೋದನೆ ಪಡೆದ ನಂತರ ಕಾರಾವಿ ಆಸ್ಪತ್ರ ಪ್ರಾರಂಭಿಸಲಾಗುವುದು.

ಈ ಪ್ರದೇಶವನ್ನು ಪ್ರಸ್ತುತ ಕಾರಾವಿ. ಯೋಜನೆ ವ್ಯಾಪ್ತಿಗೆ ಒಳಪಡಿಸದೇ ಇರುವುದರಿಂದ ಇಲಾಖಾವತಿಯಿಂದ ವೈದ್ಯಕೀಯ ಸೌಲಭ್ಯವನ್ನು ವಿಸ್ತರಿಸಲು ಸಾಧ್ಯವಾಗಿರುವುದಿಲ್ಲ. ಆದಾಗ್ಯೂ ಕಾರಾವಿ. ನಿಗಮದ ವತಿಯಿಂದ ಸಮೀಕ್ಷಾ ವರದಿಯನ್ನು ಸ್ವೀಕರಿಸಲಾಗಿದ್ದು, ಕಾರಾವಿ. ನಿಗಮದ ವತಿಯಿಂದ ರೆವಿನ್ಯೂ ಡಿಮಾರ್ಕೇಷನ್ ಲೆಟರ್ ಸ್ವೀಕರಿಸಿದ ನಂತರ ಚಿಕಿತ್ಸಾಲಯ ಪ್ರಾರಂಭಿಸಲಾಗುವುದು.

(ಈ) ಮೇಲಿನಂತೆ.

(ಉ) ಕಾರ್ಮಿಕ ವಿಮಾ ಚಿಕಿತ್ಸಾ ಕೇಂದ್ರ ಸ್ಥಾಪನೆಗೆ ಕಾರಾವಿ, ನಿಗಮದ ಮಾರ್ಗಸೂಚಿಯ ವಿವರ ಕೆಳಕಂಡಂತಿದೆ :–

1) 3,000 ಕ್ಕಿಂತ ಕಡಿಮೆ ಕಾರ್ಮಿಕರನ್ನು ಹೊಂದಿರುವ ಸ್ಥಳದಲ್ಲಿ ಖಾಸಗಿ ವೈದ್ಯ ವೃತ್ತಿದಾರರನ್ನು ನೇಮಿಸಲಾಗುವುದು (ಐ.ಎಂ.ಪಿ.)

2) 3,000 ಕ್ಕಿಂತ ಹೆಚ್ಚು ಕಾರ್ಮಿಕರನ್ನು ಹೊಂದಿರುವ ಸ್ಥಳದಲ್ಲಿ ಇಲಾಖಾವತಿಯಿಂದ ಚಿಕಿತ್ಸಾಲಯ ಪ್ರಾರಂಭಿಸಲಾಗುವುದು.

3) 25,000 ಕ್ಕಿಂತ ಹೆಚ್ಚು ಕಾರ್ಮಿಕರನ್ನು ಹೊಂದಿರುವ ಸ್ಥಳದಲ್ಲಿ–ಕಾರಾವಿ. ನಿಗಮದ ವತಿಯಿಂದ ಆಸ್ಪತ್ರೆಯನ್ನು ಪ್ರಾರಂಭಿಸಲಾಗುವುದು.

ಬಾಲಕಾರ್ಮಿಕರ ಕಲ್ಯಾಣಕ್ಕಾಗಿ ಕೈಗೊಂಡ ಕಾರ್ಯಕ್ರಮಗಳು

64 (74) ಶ್ರೀ ಸುನೀಲ್ ಕುಮಾರ್. ವಿ. (ಕಾರ್ಕಳ) :– ಮಾನ್ಯ ಕಾರ್ಮಿಕ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :–

(ಅ) ಬಾಲಕಾರ್ಮಿಕರ ಕಲ್ಯಾಣಕ್ಕಾಗಿ ಇದುವರೆವಿಗೆ ಗುರುತಿಸಿರುವ ಮಕ್ಕಳ ಸಂಖ್ಯೆ ಎಷ್ಟು ಹಾಗೂ ಇದಕ್ಕಾಗಿ ಮೀಸಲಿಟ್ಟ ಅನುದಾನ ಎಷ್ಟು ;

(ಆ) ಈ ಮಕ್ಕಳ ಶಿಕ್ಷಣ ಹಾಗೂ ಪುನರ್ ವಸತಿಗಾಗಿ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಯಾವುವು ;

(ಇ) ಬಾಲಕಾರ್ಮಿಕರ ಕಲ್ಯಾಣಕ್ಕಾಗಿ ಬಳಸಬೇಕಾಗಿದ್ದ ಕಾರ್ಪಸ್ ನಿಧಿ ರಾಜ್ಯದಲ್ಲಿ ಬಳಕೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಶ್ರೀ ಪಿ.ಟಿ. ಪರಮೇಶ್ವರನಾಯ್ಕ (ಮಾನ್ಯ ಕಾರ್ಮಿಕ ರಾಜ್ಯ ಸಚಿವರು) :–

(ಅ) 1986ರ ಬಾಲ ಕಾರ್ಮಿಕರ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆಯಡಿ 2001–02 ರಿಂದ 2013–14ನೇ ಸಾಲಿನವರೆಗೆ ಒಟ್ಟು 1,09,751 ಬಾಲ ಕಾರ್ಮಿಕರನ್ನು ಗುರುತಿಸಲಾಗಿದೆ.

ಬಾಲ ಕಾರ್ಮಿಕರ ಪುನರ್ವಸತಿಗಾಗಿ ಕರ್ನಾಟಕ ಸರ್ಕಾರವು 2014–15ನೇ ಸಾಲಿನಲ್ಲಿ 600 ಲಕ್ಷ ರೂ. ಗಳ ಅನುದಾನವನ್ನು ಹಂಚಿಕೆ ಮಾಡಲಾಗಿದೆ.

(ಆ) ಬಾಲ ಕಾರ್ಮಿಕರ ರಕ್ಷಣೆ ಮತ್ತು ಪುನರ್ವಸತಿಗಾಗಿ ಸರ್ಕಾರವು ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.

1. ಅಪಾಯಕಾರಿ ಅಥವಾ ಅಪಾಯಕಾರಿಯಲ್ಲದ ಕಾರ್ಯ ಚಟುವಟಿಕೆಗಳೆರಡರಲ್ಲೂ ಮಂಜೂರಿಗಾಗಿ ಅಥವಾ ಜೀವನೋಪಾಯಕ್ಕಾಗಿ ದುಡಿಯುವುದರಿಂದ 14 ವರ್ಷಗಳಿಗಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಪ್ರತಿಬಂದಿಸುವುದು.

2. ಬಾಲಕಾರ್ಮಿಕರನ್ನು ಪತ್ತೆಹಚ್ಚುವ ಮತ್ತು ಪುನರ್ವಸತಿಗೊಳಿಸುವ ಸಲುವಾಗಿ ನಿಯಮಿತವಾಗಿ ತಪಾಸಣೆಗಳನ್ನು ನಡೆಸಲಾಗುತ್ತಿರುವುದಲ್ಲದೆ. ಅನಿರೀಕ್ಷಿತ ತಪಾಸಣೆಗಳನ್ನು ಸಹ ನಡೆಸಲಾಗುತ್ತಿದೆ.